**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 09.**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/ 202/2021

ದಿನಾಂಕ: 15-05-2021

## ಸುತ್ತೋಲೆ

**ವಿಷಯ** : ಕೋವಿಡ್-19 ಸೋಂಕಿನಿಂದ/ಇತರೆ ಕಾರಣಗಳಿಂದ ಪೋಷಕರನ್ನು ಕಳೆದುಕೊಂಡ ಅನಾಥ ಮಕ್ಕಳ ರಕ್ಷಣೆಗೆ ಅಗತ್ಯ ಕ್ರಮವಹಿಸುವ ಕುರಿತು.

**ಉಲ್ಲೇಖ** :

1. ಸರ್ಕಾರದ ಆದೇಶ ಸಂಖ್ಯೆ: ಕಂಇ158 ಟಿಎನ್ ಆರ್ 2020(2) ದಿನಾಂಕ 03-05-2021
2. ದತ್ತು ನಿಯಮಗಳು 2017 ಹಾಗೂ ಬಾಲ ನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯಿದೆ 2015
3. ಸರ್ಕಾರದ ಆದೇಶ ಸಂಖ್ಯೆ:ಮಮಇ 48 ಮಮಅ 2018 ದಿನಾಂಕ: 06-08-2019
4. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 61 ಎ ರಡಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ರಚಿಸಲಾದ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಉಪಸಮಿತಿ.

***

ಈ ಮೂಲಕ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ರಾಜ್ಯದಲ್ಲಿ ಕೋವಿಡ್-19 ಸೋಂಕು ಪ್ರಸರಣ ಉಲ್ಬಣವಾದ ಹಿನ್ನೆಲೆಯಲ್ಲಿ ಸಾವು ನೋವುಗಳು ಸಂಭವಿಸುತ್ತಿದ್ದು, ಇಂತಹ ಸಂದರ್ಭದಲ್ಲಿ ತಂದೆ-ತಾಯಿಯನ್ನು/ಪೋಷಕರನ್ನು ಕಳೆದುಕೊಂಡಂತಹ ಮಕ್ಕಳಿಗೆ ಅಗತ್ಯ ಸೌಕರ್ಯಗಳನ್ನು ಒದಗಿಸುವುದು ಅವಶ್ಯವಾಗಿರುತ್ತದೆ. ಆದ್ದರಿಂದ ಉಲ್ಲೇಖ(1) ಆದೇಶದ ಮೂಲಕ ಕೋವಿಡ್-19 ಸೋಂಕಿನಿಂದ ಪೋಷಕರನ್ನು ಕಳೆದುಕೊಂಡ ಅನಾಥರಾದ ಮಕ್ಕಳಿಗೆ ಸರ್ಕಾರದಿಂದ ಅತ್ಯಾವಶ್ಯಕ ಸೌಕರ್ಯಗಳನ್ನು ಆದ್ಯತೆಯ ಆಧಾರದ ಮೇಲೆ ಒದಗಿಸುವ ಸಲುವಾಗಿ ಸರ್ಕಾರವು ಅಗತ್ಯಕ್ರಮಕ್ಕೆ ಮುಂದಾಗಿದೆ.

ಭಾರತದಲ್ಲಿ ಮಗುವನ್ನು ದತ್ತು ಪಡೆಯಲು ಬಯಸುವವರಿಗೆ ನಿರ್ದಿಷ್ಟ ಕಾನೂನು ಪ್ರಕ್ರಿಯೆ ಜಾರಿಯಲ್ಲಿರುತ್ತದೆ. **ಬಾಲನ್ಯಾಯ ಕಾಯಿದೆ ಪ್ರಕಾರ ಅನಾಥ ಮಕ್ಕಳನ್ನು ನೇರವಾಗಿ ದತ್ತು ಪಡೆಯುವುದು ಕಾನೂನು ಬಾಹಿರ ಮತ್ತು ಶಿಕ್ಷಾರ್ಹ ಅಪರಾಧವಾಗಿರುತ್ತದೆ.** ಬಾಲ ನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯಿದೆ 2015ರ ಅನ್ವಯ ದಿನಾಂಕ 16-01-2017ರಂದು ಉಲ್ಲೇಖ(2)ರ ಅಧಿಸೂಚನೆ ಮೂಲಕ ದತ್ತು ಪ್ರಕ್ರಿಯೆಗೆ ಅನುಸರಿಸಬೇಕಾದ ನಿಯಮಗಳ ಕುರಿತು ತಿಳಿಸಲಾಗಿದೆ.

ಬಾಲ ನ್ಯಾಯ ಕಾಯಿದೆ ಅಡಿಯಲ್ಲಿ ಮಕ್ಕಳ ಆರೈಕೆ ಮತ್ತು ಪೋಷಣೆಗಾಗಿ ರಾಜ್ಯದ ಪ್ರತೀ ಜಿಲ್ಲೆಯಲ್ಲಿ 05 ಸದಸ್ಯರ **ಮಕ್ಕಳ ಕಲ್ಯಾಣ ಸಮಿತಿಯನ್ನು** ರಚಿಸಲಾಗಿದೆ. ಒಬ್ಬರು ಅಧ್ಯಕ್ಷರು ಹಾಗೂ 04 ಜನ ಸದಸ್ಯರು ಇದ್ದು ಇವರಲ್ಲಿ ಒಬ್ಬರು ಮಹಿಳೆ ಮತ್ತು ಒಬ್ಬರು ಮಕ್ಕಳ ವಿಷಯದಲ್ಲಿ ಪರಿಣಿತರಾಗಿರುತ್ತಾರೆ. ಮಕ್ಕಳ ಕಲ್ಯಾಣ ಸಮಿತಿಯು ಶಾಸನಬದ್ಧ ಸ್ವಾಯತ್ತ ಸಂಸ್ಥೆಯಾಗಿದ್ದು, ಆರೈಕೆ ಮತ್ತು ರಕ್ಷಣೆಯ ಅಗತ್ಯವಿರುವ ಮಕ್ಕಳೊಂದಿಗೆ ವ್ಯವಹರಿಸಲು ಸಮರ್ಥ ಪ್ರಾಧಿಕಾರವೆಂದು ಘೋಷಿಸಲಾಗಿದೆ. ಯಾವುದೇ ಮಗುವನ್ನು ದತ್ತು ಪ್ರಕ್ರಿಯೆಗೆ ಒಳಪಡಿಸುವ ಮೊದಲು ದತ್ತು ಸ್ವೀಕಾರಕ್ಕೆ ಮಗುವು ಯೋಗ್ಯವೇ ಎಂಬುದನ್ನು ಮಕ್ಕಳ ಕಲ್ಯಾಣ ಸಮಿತಿಯು ಘೋಷಿಸಬೇಕಾಗಿರುತ್ತದೆ. ಮಕ್ಕಳ ಕಲ್ಯಾಣ ಸಮಿತಿಯ ಆದೇಶಗಳ ನಂತರವೇ ಮಗುವನ್ನು ದತ್ತು ಪ್ರಕ್ರಿಯೆಗೆ ಒಳಪಡಿಸತಕ್ಕದ್ದು. ದತ್ತು ಪ್ರಕ್ರಿಯೆಯನ್ನು ಕೇಂದ್ರ ದತ್ತು ಸಂಪನ್ಮೂಲ ಪ್ರಾಧಿಕಾರ(CARA- Central Adoption Resource Authority) ಸಂಸ್ಥೆಯು ಕೈಗೊಳ್ಳುತ್ತದೆ.

ಕೇಂದ್ರ ದತ್ತು ಸಂಪನ್ಮೂಲ ಪ್ರಾಧಿಕಾರ(CARA- Central Adoption Resource Authority) ಕಾನೂನುಬದ್ಧ ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಶಾಸನಬದ್ಧ ಸಂಸ್ಥೆಯಾಗಿದ್ದು ಇದು ಭಾರತೀಯ ಮಕ್ಕಳನ್ನು ದತ್ತು ಪಡೆಯಲು ನೋಡಲ್ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತದೆ. ದೇಶೀಯ ಮತ್ತು ಅಂತರ್-ದೇಶೀಯ ದತ್ತುಗಳನ್ನು ಮೇಲ್ವಿಚಾರಣೆ ಮಾಡುವುದು ಮತ್ತು ನಿಯಂತ್ರಿಸುವುದು ಇದರ ಪ್ರಮುಖ ಕರ್ತವ್ಯವಾಗಿರುತ್ತದೆ.ಈ ಪ್ರಾಧಿಕಾರದ ಮಾರ್ಗಸೂಚಿ ಪ್ರಕಾರ ದತ್ತು ಕಾರ್ಯಕ್ರಮದ ಅನುಷ್ಠಾನ ಸಂಪೂರ್ಣವಾಗಿ ಆನ್ ಲೈನ್ ಆಧಾರಿತವಾಗಿದೆ. ಪೋಷಕರು ಆನ್ ಲೈನ್ ನಲ್ಲಿ ಅಗತ್ಯ ದಾಖಲೆಗಳನ್ನು ಸಲ್ಲಿಸುವುದರ ಮೂಲಕ ನೋಂದಣಿ ಮಾಡಿಕೊಳ್ಳುವುದರಿಂದ ಮಗುವನ್ನು ಆನ್ ಲೈನ್ ನಲ್ಲಿ ನೋಡಿ ಆಯ್ಕೆ ಮಾಡಿಕೊಳ್ಳುವವರೆಗಿನ ಪ್ರಕ್ರಿಯೆಯು ಸಂಪೂರ್ಣವಾಗಿ ಆನ್ ಲೈನ್ ಆಧಾರಿತವಾಗಿರುತ್ತದೆ. ಕಾರಣ ದತ್ತುಪಡೆಯಲು ಬಯಸುವ ಪೋಷಕರು ಅಗತ್ಯ ದಾಖಲೆಗಳೊಂದಿಗೆ ನೋಂದಣಿ ಮಾಡಿಕೊಂಡು CARA ಸಂಸ್ಥೆಯ ಮೂಲಕವೇ ದತ್ತು ಪಡೆಯತಕ್ಕದ್ದು.

ಉಲ್ಲೇಖಿತ (3)ರ ಆದೇಶಗಳ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಟ ತಡೆಗಟ್ಟುವಿಕೆ, ಬಾಲ್ಯ ವಿವಾಹ ನಿಷೇಧ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಉಲ್ಲೇಖ(4)ರ ಅಡಿಯಲ್ಲಿ **ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ**ಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಟ ಮತ್ತು ಬಾಲ್ಯ ವಿವಾಹ ತಡೆಗಟ್ಟಲು ಅಗತ್ಯ ಕ್ರಮವಹಿಸಲು ಸೂಚಿಸಿದೆ

ಪಂಚಾಯತ್ ರಾಜ್ ವ್ಯವಸ್ಥೆಯ ಮೂರು ಹಂತದ ಸಂಸ್ಥೆಗಳು ಉಲ್ಲೇಖಿತ ಆದೇಶಗಳ ಮತ್ತು ಅದಿನಿಯಮಗಳ ಹಾಗೂ ಮೇಲೆ ತಿಳಿಸಲಾದ ಅಂಶಗಳ ಕುರಿತು ಸೂಕ್ತ ಗಮನಹರಿಸುವುದು ಪ್ರಸ್ತುತ ಸನ್ನಿವೇಶದಲ್ಲಿ ಅತ್ಯಗತ್ಯವಾಗಿದೆ. ಗ್ರಾಮ ಪಂಚಾಯತಿ ಕಾರ್ಯಪಡೆಯು, ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಮನ್ವಯತೆಯಲ್ಲಿ ಬಾಲನ್ಯಾಯ ಕಾಯಿದೆ ಹಾಗೂ ದತ್ತು ಪ್ರಕ್ರಿಯೆ ಕುರಿತು ವ್ಯಾಪಕ ಪ್ರಚಾರ ನೀಡುವುದು ಹಾಗೂ ಆಯಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅನಾಥ ಮಕ್ಕಳು ಕಂಡುಬಂದಲ್ಲಿ ಅಂತಹ ಮಕ್ಕಳ ರಕ್ಷಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಅನುಸರಿಸುವುದು,

1. ಮಕ್ಕಳ ಸಹಾಯವಾಣಿ ಸಂಖ್ಯೆ **1098** ಗೆ ಕರೆ ಮಾಡಿ ತಿಳಿಸುವುದು.
2. ಮಕ್ಕಳ ಪೋಷಕರಿಗಾಗಿ ಇರುವ ಸಹಾಯವಾಣಿ ಸಂಖ್ಯೆ 14499 ಗೆ ಕರೆ ಮಾಡಿ ತಿಳಿಸಿಸುವುದು
3. ತಮ್ಮ ಜಿಲ್ಲೆಯಲ್ಲಿನ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ (DCPU-District Child Protection Unit) ಸಿಬ್ಬಂದಿಗಳಿಗೆ ತಿಳಿಸುವುದು.
4. ತಮ್ಮ ಜಿಲ್ಲೆಯಲ್ಲಿನ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಅನಾಥ ಮಗುವನ್ನು ನೇರವಾಗಿ ಹಾಜರುಪಡಿಸುವುದು.

ಮೇಲಿನ ಯಾವುದಾದರೂ ಕ್ರಮವನ್ನು ಅನುಸರಿಸುವುದರ ಮೂಲಕ ಮಕ್ಕಳ ಕಲ್ಯಾಣ ಸಮಿತಿಯು ಅನಾಥ ಮಗುವಿನ ರಕ್ಷಣೆ ಮತ್ತು ದತ್ತು ಪ್ರಕ್ರಯೆಗೆ ಸಂಬಂಧಿಸಿದಂತೆ ಮುಂದಿನ ಕಾನೂನು ಕ್ರಮ ಕೈಗೊಳ್ಳಲು ಪಂಚಾಯತ್ ರಾಜ್ ಸಂಸ್ಥೆಗಳು ನೆರವಾಗಲು ಸೂಚಿಸಿದೆ.

**(ಉಮಾ ಮಹಾದೇವನ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**<u>ಇವರಿಗೆ,</u>**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು